**National**
**Kannada**
**20.08.2025  19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಸಂಸತ್ತಿನ ಉಭಯ ಸದನಗಳಲ್ಲಿ ಗದ್ದಲದ ನಡುವೆ ಹಲವು ಮಸೂದೆಗಳ ಮಂಡನೆ ; ಕಲಾಪ ನಾಳೆಗೆ ಮುಂದೂಡಿಕೆ
2. ಆನ್‌ಲೈನ್ ಗೇಮಿಂಗ್ ನಿಯಂತ್ರಣ ಮಸೂದೆ-೨೦೨೫ ; ಲೋಕಸಭೆಯಲ್ಲಿಂದು ಮಂಡನೆ
3. ರಷ್ಯಾದಲ್ಲಿ ವಿದ್ವಾಂಸರು ಹಾಗೂ ಚಿಂತಕರ ಚಾವಡಿಯ ಪ್ರತಿನಿಧಿಗಳೊಂದಿಗೆ ವಿದೇಶಾಂಗ ಸಚಿವ ಎಸ್. ಜೈಂಶಕರ್ ಸಂವಾದ
4. ಏಷ್ಯಾ ಕಪ್ ಹಾಕಿ ಪಂದ್ಯಾವಳಿಗೆ ಭಾರತದ ೧೮ ಸದಸ್ಯರ ತಂಡ ಪ್ರಕಟ

<><><><>

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿಷಯದಿಂದ ಇಂದು ಸಂಸತ್ತಿನ ಉಭಯ ಸದನಗಳ ಕಲಾಪಗಳು ಅಸ್ತವ್ಯಸ್ತಗೊಂಡು, ಹಲವು ಬಾರಿ ಮುಂದೂಡಲ್ಪಟ್ಟವು. ಲೋಕಸಭೆಯನ್ನು ನಾಲ್ಕು ಬಾರಿ ಮುಂದೂಡಲಾಯಿತು ಮತ್ತು ರಾಜ್ಯಸಭೆಯನ್ನು ಎರಡು ಬಾರಿ ಮುಂದೂಡಲಾಯಿತು, ಅಂತಿಮವಾಗಿ ದಿನದ ಮಟ್ಟಿಗೆ ಮುಂದೂಡಲಾಯಿತು. ಗದ್ದಲದ ನಡುವೆ, ಸಂವಿಧಾನ-ನೂರ ಮೂವತ್ತನೇ ತಿದ್ದುಪಡಿ ಮಸೂದೆ, ೨೦೨೫, ಕೇಂದ್ರ ಪ್ರದೇಶಗಳ ಸರ್ಕಾರ-ತಿದ್ದುಪಡಿ ಮಸೂದೆ, ೨೦೨೫ ಮತ್ತು ಜಮ್ಮು ಮತ್ತು ಕಾಶ್ಮೀರ ಮರುಸಂಘಟನೆ-ತಿದ್ದುಪಡಿ ಮಸೂದೆ, ೨೦೨೫ ಅನ್ನು ಲೋಕಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಂಡಿಸಿದರು. ಲೋಕಸಭೆ ಬೆಳಿಗ್ಗೆ ೧೧ ಗಂಟೆಗೆ ಸಭೆ ಸೇರಿದಾಗ, ವಿರೋಧ ಪಕ್ಷಗಳು ಮತದಾರರ ಪಟ್ಟಿ ಪರಿಷ್ಕರಣೆ ವಿಷಯದ ಕುರಿತು ಚರ್ಚೆಗೆ ಒತ್ತಾಯಿಸಿ ಪ್ರತಿಭಟನೆಯನ್ನು ಪ್ರಾರಂಭಿಸಿದವು. ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಪ್ರತಿಭಟನಾ ನಿರತ ಸದಸ್ಯರ ವರ್ತನೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ನಂತರ ಸ್ಪೀಕರ್ ಸದನವನ್ನು ಮಧ್ಯಾಹ್ನ ೧೨ ಗಂಟೆಯವರೆಗೆ ಮುಂದೂಡಿದರು. ಇದಕ್ಕೂ ಮೊದಲು, ಮೊದಲ ಮುಂದೂಡಿಕೆಯ ನಂತರ ಮಧ್ಯಾಹ್ನ ೧೨ ಗಂಟೆಗೆ ಲೋಕಸಭೆ ಸಮಾವೇಶಗೊಂಡಾಗ, ಕೇಂದ್ರ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ವಿರೋಧ ಪಕ್ಷದ ಗದ್ದಲದ ನಡುವೆ ಆನ್‌ಲೈನ್ ಗೇಮಿಂಗ್ ಪ್ರಚಾರ ಮತ್ತು ನಿಯಂತ್ರಣ ಮಸೂದೆ, ೨೦೨೫ ಅನ್ನು ಮಂಡಿಸಿದರು. ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸದನಕ್ಕೆ ಅಡ್ಡಿಪಡಿಸಿದ್ದಕ್ಕಾಗಿ ವಿರೋಧ ಪಕ್ಷದ ಸದಸ್ಯರ ವರ್ತನೆಯನ್ನು ಆಕ್ಷೇಪಿಸಿದರು. ಕಳೆದ ಮೂರು ದಿನಗಳಿಂದ ವಿರೋಧ ಪಕ್ಷವು ಸದನದಲ್ಲಿ ಗಲಭೆ ಸೃಷ್ಟಿಸುತ್ತಿದೆ.

ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರ ಸಾಧನೆಯ ಕುರಿತು ವಿಶೇಷ ಚರ್ಚೆಗೆ ಅವಕಾಶ ನೀಡುತ್ತಿಲ್ಲ ಎಂದು ಅವರು ಹೇಳಿದರು. ಇದನ್ನು ಅವರು ದುರದೃಷ್ಟಕರ ಎಂದು ಬಣ್ಣಿಸಿದರು. ಸಂಸದೀಯ ವ್ಯವಹಾರಗಳ ಸಚಿವರ ಮನವಿಗೆ ವಿರೋಧ ಪಕ್ಷದ ಸದಸ್ಯರು ಕಿವಿಗೊಡದೆ ತಮ್ಮ ಪ್ರತಿಭಟನೆಯನ್ನು ಮುಂದುವರೆಸಿದರು, ಇದರಿಂದಾಗಿ ಸದನವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಯಿತು. ಇದಕ್ಕೂ ಮೊದಲು, ಮಧ್ಯಾಹ್ನ ೨ ಗಂಟೆಗೆ ಎರಡನೇ ಬಾರಿ ಮುಂದೂಡಿದ ನಂತರ ಸದನವು ಸಭೆ ಸೇರಿದಾಗ, ಗದ್ದಲದ ದೃಶ್ಯದ ನಡುವೆ, ಸಭಾಪತಿಗಳು ಸದನವನ್ನು ಮಧ್ಯಾಹ್ನ ೩ ಗಂಟೆಯವರೆಗೆ ಮುಂದೂಡಿದರು. ಮೂರನೇ ಬಾರಿ ಕಲಾಪ ಮುಂದೂಡಿಕೆಯ ನಂತರ ಮಧ್ಯಾಹ್ನ ೩ ಗಂಟೆಗೆ ಸದನ ಸಭೆ ಸೇರಿದಾಗ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಪ್ರತಿಭಟನಾ ನಿರತ ಸಂಸದರ ನಡವಳಿಕೆಯನ್ನು ಆಕ್ಷೇಪಿಸಿದರು. ಅವರ ನಡವಳಿಕೆಯು ಸಂಸತ್ತಿನ ರೂಢಿಗಳು ಮತ್ತು ಶಿಷ್ಟಾಚಾರಕ್ಕೆ ವಿರುದ್ಧವಾಗಿದೆ. ಸದನದ ಕಲಾಪಗಳಿಗೆ ಅಡ್ಡಿಪಡಿಸುವುದು ಸೂಕ್ತವಲ್ಲ ಎಂದು ಅವರು ಹೇಳಿದರು. ನಂತರ, ಸದನವು ಈ ಮಸೂದೆಗಳನ್ನು ಹೆಚ್ಚಿನ ಪರಿಶೀಲನೆಗಾಗಿ ಸಂಸತ್ತಿನ ಜಂಟಿ ಸಮಿತಿಗೆ ಒಪ್ಪಿಸಿತು. ಗದ್ದಲ ಮುಂದುವರಿದಂತೆ, ಸ್ಪೀಕರ್ ಸದನವನ್ನು ಸಂಜೆ ೫ ಗಂಟೆಯವರೆಗೆ ಮುಂದೂಡಿದರು.

<><><>

ಇಂದು ಲೋಕಸಭಾ ಗದ್ದಲದ ನಡುವೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಆನ್‌ಲೈನ್ ಗೇಮಿಂಗ್ ನಿಯಂತ್ರಣ ಮಸೂದೆ ೨೦೨೫ ಅಧಿವೇಶನದಲ್ಲಿ ಮಂಡಿಸಿದರು.

ಆನ್‌ಲೈನ್ ಗೇಮಿಂಗ್ ವೇದಿಕೆಗಳನ್ನು ನಿಯಂತ್ರಿಸುವ ಉದ್ದೇಶದ 'ಆನ್‌ಲೈನ್ ಗೇಮಿಂಗ್ ಮಸೂದೆ'ಗೆ ಕೇಂದ್ರ ಸಚಿವ ಸಂಪುಟ ಇತ್ತೀಚೆಗೆ ಅನುಮೋದನೆ ನೀಡಿತ್ತು. ಇತ್ತೀಚಿನ ದಿನಗಳಲ್ಲಿ ಯುವಸಮ ಮತ್ತು ಮಧ್ಯಮ ವರ್ಗ ಹಾಗೂ ಬಡವರ್ಗದವರು ಈ ಆನ್‌ಲೈನ್ ಗೇಮಿಂಗ್ ಚಟಕ್ಕೆ ಒಳಗಾಗುತ್ತಿದ್ದಾರೆ. ವಿಶೇಷವಾಗಿ ಯುವಕರು ಮತ್ತು ಬಡ ವರ್ಗವನ್ನು ರಕ್ಷಿಸುವ ಸಲುವಾಗಿ ಇಂದು ಈ ಮಸೂದೆಯನ್ನು ಮಂಡಿಸಲಾಗಿದೆ. ಆನ್‌ಲೈನ್ ಬೆಟ್ಟಿಂಗ್ ಅನ್ನು ಶಿಕ್ಷಾರ್ಹ ಅಪರಾಧವೆಂದು ಪರಿಗಣಿಸುವುದು, ಹಣ ಆಧಾರಿತ ಎಲ್ಲ ಆನ್‌ಲೈನ್ ಗೇಮ್‌ಗಳನ್ನು ನಿಷೇಧಿಸುವುದು, ಆನ್‌ಲೈನ್ ಗೇಮಿಂಗ್‌ಗೆ ಸಂಬಂಧಿಸಿದ ಹಣಕಾಸು ವ್ಯವಹಾರ ನಡೆಸಲು ಬ್ಯಾಂಕುಗಳು ಹಾಗೂ ಹಣಕಾಸು ಸಂಸ್ಥೆಗಳಿಗೆ ಅನುಮತಿ ನೀಡದಿರುವುದು ಸೇರಿ ಹಲವು ಅವಕಾಶಗಳನ್ನು ಈ ಮಸೂದೆ ಒಳಗೊಂಡಿದೆ. ಈ ಕುರಿತು ನಮ್ಮ ಆಕಾಶವಾಣಿಯೊಂದಿಗೆ ವಕೀಲ ಎಲ್. ಹೆಚ್. ಅರುಣ್ ಕುಮಾರ್ ತಮ್ಮ ಅನಿಸಿಕೆಯನ್ನು ಹಂಚಿಕೊಂಡಿದ್ದಾರೆ.

<><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ರಷ್ಯಾದ ಪ್ರಮುಖ ವಿದ್ವಾಂಸರು ಮತ್ತು ಚಿಂತಕರ ಚಾವಡಿ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದ್ದಾರೆ. ಡಾ. ಜೈಶಂಕರ್ ಸಭೆಯಲ್ಲಿ ಭಾರತ-ರಷ್ಯಾ ಸಂಬಂಧಗಳು, ಸಮಕಾಲೀನ ವಿಶ್ವ ಭೌಗೋಳಿಕ ರಾಜಕೀಯ ಮತ್ತು ಭಾರತದ ದೃಷ್ಟಿಕೋನದ ಬಗ್ಗೆ ಚರ್ಚಿಸಲಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹೇಳಿದ್ದಾರೆ. ಇಂದು ಅವರು, ಭಾರತ-ರಷ್ಯಾ ಅಂತರ-ಸರ್ಕಾರಿ ಆಯೋಗದ ವ್ಯಾಪಾರ, ಆರ್ಥಿಕ, ವೈಜ್ಞಾನಿಕ, ತಾಂತ್ರಿಕ ಮತ್ತು ಸಾಂಸ್ಕೃತಿಕ ಸಹಕಾರದ ೨೬ನೇ ಅಧಿವೇಶನದ ಸಹ-ಅಧ್ಯಕ್ಷರಾಗಲಿದ್ದಾರೆ. ಅವರು ಮಾಸ್ಕೋದಲ್ಲಿ ಭಾರತ-ರಷ್ಯಾ ವ್ಯಾಪಾರ ವೇದಿಕೆಯ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ವಿದೇಶಾಂಗ ಸಚಿವರು ರಷ್ಯಾಕ್ಕೆ ಮೂರು ದಿನಗಳ ಅಧಿಕೃತ ಭೇಟಿಗಾಗಿ ನಿನ್ನೆ ಸಂಜೆ ಮಾಸ್ಕೋಗೆ ಆಗಮಿಸಿದರು. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಇತ್ತೀಚಿನ ಮಾಸ್ಕೋ ಪ್ರವಾಸದ ನಂತರ ಜೈಶಂಕರ್ ಅವರ ಭೇಟಿ ನಡೆದಿದೆ. ಅಲ್ಲಿ ಅವರು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಮೊದಲ ಉಪ ಪ್ರಧಾನ ಮಂತ್ರಿ ಮಾಂಟುರೋವ್ ಮತ್ತು ಭದ್ರತಾ ಮಂಡಳಿಯ ಕಾರ್ಯದರ್ಶಿ ಸೆರ್ಗೆಯ್ ಶೋಯಿಗು ಅವರೊಂದಿಗೆ ಚರ್ಚೆ ನಡೆಸಿದರು.

<><><>

ಸಂಸತ್ತು ಭಾರತೀಯ ನಿರ್ವಹಣಾ ಸಂಸ್ಥೆಗಳ-ತಿದ್ದುಪಡಿ ಮಸೂದೆ ೨೦೨೫ ಅನ್ನು ಅಂಗೀಕರಿಸಿದ್ದು, ರಾಜ್ಯಸಭೆಯು ಇಂದು ಅದಕ್ಕೆ ಅನುಮೋದನೆ ನೀಡಿದೆ. ಮಸೂದೆಯ ಮೇಲಿನ ಚರ್ಚೆಗೆ ಉತ್ತರಿಸಿದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ನರೇಂದ್ರ ಮೋದಿ ಸರ್ಕಾರವು ಹೊಸ ಸಂಸ್ಥೆಗಳನ್ನು ರಚಿಸಲು ಮತ್ತು ದೇಶದ ವಿದ್ಯಾರ್ಥಿಗಳಿಗೆ ಅವಕಾಶಗಳನ್ನು ನೀಡಲು ಬದ್ಧವಾಗಿದೆ ಎಂದು ಹೇಳಿದರು. ರಾಜ್ಯಸಭೆಯನ್ನು ಒಂದು ದಿನದ ಮಟ್ಟಿಗೆ ಮುಂದೂಡಲಾಗಿದೆ.

<><><>

ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳು ಭಾರತದ ಆತ್ಮನಿರ್ಭರ ಭಾರತ್ ಆಗುವ ಪ್ರಯಾಣಕ್ಕೆ ನಾಂದಿ ಹಾಡುತ್ತವೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ನವದೆಹಲಿಯಲ್ಲಿ ಪರಿಹಾರ ಸೆಸ್, ಆರೋಗ್ಯ ಮತ್ತು ಜೀವ ವಿಮೆ ಮತ್ತು ದರ ತರ್ಕಬದ್ಧಗೊಳಿಸುವಿಕೆ ಕುರಿತು ಜಿಎಸ್‌ಟಿ ಮಂಡಳಿಯು ರಚಿಸಿದ ಸಚಿವರ ಗುಂಪನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಸಾಮಾಜಿಕ ಜಾಲತಾಣದಲ್ಲಿ ಹಣಕಾಸು ಸಚಿವಾಲಯವು ಈ ಸುಧಾರಣೆಗಳು ರಚನಾತ್ಮಕ ಸುಧಾರಣೆಗಳು, ದರ ತರ್ಕಬದ್ಧಗೊಳಿಸುವಿಕೆ ಮತ್ತು ಜೀವನ ಸುಲಭತೆ ಸೇರಿದಂತೆ ಮೂರು ಪ್ರಮುಖ ಸ್ತಂಭಗಳನ್ನು ಆಧರಿಸಿವೆ ಎಂದು ಹೇಳಿದೆ.

<><><>

ಎನ್‌ಡಿಎಯ ಉಪರಾಷ್ಟ್ರಪತಿ ಅಭ್ಯರ್ಥಿ ಸಿ.ಪಿ. ರಾಧಾಕೃಷ್ಣನ್ ಇಂದು ಸಂಸತ್ ಭವನದಲ್ಲಿ ತಮ್ಮ ನಾಮಪತ್ರ ಸಲ್ಲಿಸಿದರು. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಜೆ.ಪಿ. ನಡ್ಡಾ, ಕಿರಣ್ ರಿಜಿಜು ಮತ್ತು ಎನ್‌ಡಿಎ ಮಿತ್ರಪಕ್ಷಗಳ ನಾಯಕರು ಎಲ್‌ಜೆಪಿ (ಆರ್) ನ ಚಿರಾಗ್ ಪಾಸ್ವಾನ್, ಜೆಡಿ (ಯು) ನ ರಾಜೀವ್ ರಂಜನ್ ಸಿಂಗ್, ಎನ್‌ಸಿಪಿಯ ಪ್ರಫುಲ್ ಪಟೇಲ್ ಸೇರಿದಂತೆ ಇತರರು ಈ ಸಂದರ್ಭದಲ್ಲಿ ಹಾಜರಿದ್ದರು. ನಾಮಪತ್ರ ಸಲ್ಲಿಸಲು ನಾಳೆ ಕೊನೆಯ ದಿನಾಂಕವಾಗಿದ್ದು, ಶುಕ್ರವಾರ ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಈ ತಿಂಗಳ ೨೫ ರೊಳಗೆ ನಾಮಪತ್ರಗಳನ್ನು ಹಿಂಪಡೆಯಬಹುದು.

<><><>

ಛತ್ತೀಸ್‌ಗಢದಲ್ಲಿ, ಹತ್ತು ಮಹಿಳೆಯರು ಸೇರಿದಂತೆ ೨೯ ಮಾವೋವಾದಿಗಳು ಇಂದು ಶರಣಾದರು. ಅವರ ಮೇಲೆ ಸುಮಾರು ಐವತ್ತೈದು ಲಕ್ಷ ರೂಪಾಯಿಗಳ ಬಹುಮಾನವನ್ನು ಘೋಷಿಸಲಾಗಿತ್ತು.

<><><>

ಇದೇ ೨೯ ರಿಂದ ಸೆಪ್ಟೆಂಬರ್ ೭ ರವರೆಗೆ ಬಿಹಾರದಲ್ಲಿ ನಡೆಯಲಿರುವ ಪುರುಷರ ಏಷ್ಯಾ ಕಪ್ ಹಾಕಿ ಪಂದ್ಯಾವಳಿಗೆ ಹಾಕಿ ಇಂಡಿಯಾ ಇಂದು ೧೮ ಸದಸ್ಯರ ತಂಡವನ್ನು ಪ್ರಕಟಿಸಿದೆ. ಅನುಭವಿ ಆಟಗಾರ ಹರ್ಮನ್ ಪ್ರೀತ್ ಸಿಂಗ್ ತಂಡದ ನಾಯಕನಾಗಿರಲಿದ್ದಾರೆ. ಒಟ್ಟಾರೆ ತಂಡ ಎಲ್ಲಾ ವಿಭಾಗದಲ್ಲೂ ಸಮತೋಲಿತವಾಗಿದ್ದು, ಬಲಿಷ್ಠ ಆಟಗಾರರನ್ನು ಹೊಂದಿದೆ. ಈ ಪಂದ್ಯಾವಳಿ, ೨೦೨೬ ರ ಬೆಲ್ಜಿಯಂ-ನೆದರ್ ಲ್ಯಾಂಡ್ ಎಫ್‌ಐಎಚ್ ಹಾಕಿ ವಿಶ್ವಕಪ್ ಗೆ ಅರ್ಹತಾ ಪಂದ್ಯಾವಳಿಯೂ ಆಗಿದ್ದು, ಭಾರತ ತಂಡ, ಜಪಾನ್, ಚೀನಾ, ಮತ್ತು ಕಜಕಿಸ್ತಾನ್ ತಂಡಗಳೊಂದಿಗೆ ಎ ಗುಂಪಿನಲ್ಲಿದೆ. ಭಾರತ ತಂಡ ಇದೇ ೨೯ ರಂದು ಚೀನಾ ತಂಡವನ್ನು ಎದುರಿಸುವ ಮೂಲಕ ಅಭಿಯಾನ ಆರಂಭಿಸಲಿದ್ದು, ಇದೇ ೩೧ ರಂದು ಜಪಾನ್ ಹಾಗೂ ಸೆಪ್ಟೆಂಬರ್ ಒಂದರಂದು ಕಜಕಿಸ್ತಾನ್ ತಂಡವನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>